ಬೀದರ್ ಜಿಲ್ಲೆಯ ಪದವಿ ಕಾಲೇಜುಗಳಿಗೆ ಸ್ವಂತ ಕಟ್ಟಡ ನಿರ್ಮಾಣ

692 (1095) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಸ್ವಂತ ಕಟ್ಟಡ ಹೊಂದಿದ ಕಾಲೇಜು ಎಷ್ಟು; (ವಿವರ ನೀಡುವುದು);

ಆ) ಭಾಲ್ಕಿ ಪಟ್ಟಣದಲ್ಲಿರುವ ಸ್ವಂತ ನಿವೇಶನ ಹೊಂದಿರುವ ಪ್ರಥಮದರ್ಜೆ ಕಾಲೇಜಿಗೆ ಕಟ್ಟಡ ನಿರ್ಮಾಣಕ್ಕೆ ಮುಂದಿನ ಸಾಲಿನ ಆಯವ್ಯಯದಲ್ಲಿ ಅನುದಾನ ಬಿಡುಗಡೆ ಮಾಡಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ?

ಡಾ॥ ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ ಸಚಿವರು) :

ಅ) ಬೀದರ್ ಜಿಲ್ಲೆಯಲ್ಲಿ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ–08 (ಬೀದರ್, ಚಿಟಗುಪ್ಪ, ಹುಲಸೂರು, ಮನಹಳ್ಳಿ, ಔರಾದ್, ಬಸವಕಲ್ಯಾಣ, ಭಾಲ್ಕಿ ಮತ್ತು ಹುಮ್ನಾಬಾದ್) ಇವುಗಳಲ್ಲಿ ಸ್ವಂತ ಕಟ್ಟಡ ಹೊಂದಿದ ಕಾಲೇಜುಗಳ ಸಂಖ್ಯೆ 02 (ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಬೀದರ್ ಮತ್ತು ಚಿಟಗುಪ್ಪ)

ಆ) ಅನುದಾನದ ಲಭ್ಯತೆಯನ್ನಾಧರಿಸಿ ಕಟ್ಟಡ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು.

ಬೀದರ್ ಜಿಲ್ಲೆಯಲ್ಲಿ ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆ

691 (1094) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) : ಮಾನ್ಯ ಗ್ರಾಮಪಂಚಾಯತ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ 2008–09, 2009–10 ಹಾಗೂ 2010–11ನೇ ಸಾಲಿನಲ್ಲಿ ತೆಗೆದುಕೊಂಡಿರುವ ಕಾಮಗಾರಿಗಳು ಯಾವುವು; ಎಷ್ಟು ಪೂರ್ಣಗೊಂಡಿದೆ;